**National**
**Kannada**
**11.10.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಅವರಿಂದ ಚೆನ್ನೈನಲ್ಲಿ 13 ಸಾವಿರ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ, ಶಂಕುಸ್ಥಾಪನೆ
2. ದೇಶಾದ್ಯಂತ ನವರಾತ್ರಿ ಮತ್ತು ದಸರಾ ಉತ್ಸವ ಆರಂಭ; ವಿಶ್ವವಿಖ್ಯಾತ ಮೈಸೂರು ದಸರಾಗೆ ಚಾಲನೆ
3. ಆಫ್ರಿಕಾದ ಜಿಬೂಟಿ ಕರಾವಳಿಯಲ್ಲಿ ದೋಣಿ ದುರಂತ; 109 ವಲಸಿಗರು ಸಾವು, ಹತ್ತಾರು ಮಂದಿ ನಾಪತ್ತೆ
4. ಭಾರತ-ವೆಸ್ಟ್ ಇಂಡೀಸ್ ನಡುವಿನ 3ನೇ ಟಿ-20 ಕ್ರಿಕೆಟ್ ಪಂದ್ಯ; ಟಾಸ್ ಗೆದ್ದ ಪ್ರವಾಸ ತಂಡ ಫೀಲ್ಡಿಂಗ್ ಆಯ್ಕೆ

---

ಪ್ರಧಾನಮಂತ್ರಿ ನರೇಂದ್ರ ಮೋದಿ ಚೆನ್ನೈನಲ್ಲಿಂದು 13 ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಹಲವು ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ರಸ್ತೆ ಮತ್ತು ರೈಲು ಸಾರಿಗೆ, ಬಂದರು ಮೂಲಸೌಕರ್ಯ, ಪೆಟ್ರೋಲಿಯಂ ಹಾಗೂ ವೈಜ್ಞಾನಿಕ ಸಂಶೋಧನಾ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳು ಇದರಲ್ಲಿ ಸೇರಿವೆ. ಸುಮಾರು 3 ಸಾವಿರದ 700 ಕೋಟಿ ರೂಪಾಯಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು, ಚೆನ್ನೈ, ಕಾಮರಾಜರ್ ಮತ್ತು ವಿ.ಒ. ಚಿದಂಬರನಾರ್ ಬಂದರುಗಳ ಅಭಿವೃದ್ಧಿ ಹಾಗೂ ಅಮೃತ ಭಾರತ್ ನಿಲ್ದಾಣ ಯೋಜನೆಯಡಿ ರೈಲು ನಿಲ್ದಾಣಗಳ ಅಭಿವೃದ್ಧಿ ಕಾಮಗಾರಿಗಳಿಗೂ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ಯೋಜನೆಗಳು ತಮಿಳುನಾಡಿನ ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸಲಿದ್ದು, ಕೈಗಾರಿಕೆ ಮತ್ತು ವ್ಯಾಪಾರಕ್ಕೆ ಉತ್ತೇಜನ ನೀಡಲಿವೆ. ರಾಜ್ಯದ ಯುವಜನರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದರ ಜೊತೆಗೆ ಜನರ ದೈನಂದಿನ ಪ್ರಯಾಣವನ್ನು ಸುಲಭಗೊಳಿಸಿ, ಆರ್ಥಿಕ ಬೆಳವಣಿಗೆಗೆ ನೆರವಾಗಲಿವೆ. ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರ ಸಹಕಾರದೊಂದಿಗೆ ಈ ಅಭಿವೃದ್ಧಿ ಪಯಣವನ್ನು ಮುಂದುವರಿಸುವುದಾಗಿ ತಿಳಿಸಿದರು.

ಸಾರ್ವಜನಿಕ ಸೇವೆಯಲ್ಲಿ ಸರ್ಕಾರದ ಮುಖ್ಯಸ್ಥರಾಗಿ 25 ವರ್ಷಗಳನ್ನು ಪೂರ್ಣಗೊಳಿಸಿರುವುದನ್ನು ಸ್ಮರಿಸಿದ ಪ್ರಧಾನಿ ನರೇಂದ್ರ ಮೋದಿ, 2001ರ ಅಕ್ಟೋಬರ್‌ನಲ್ಲಿ ಗುಜರಾತ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಬಳಿಕ ತಮ್ಮ ಪಯಣ ಆರಂಭವಾಯಿತು. ಭಾರತದ ಪ್ರಗತಿಗೆ ಶ್ರೀಮಂತ ಸಾಂಸ್ಕೃತಿಕ ಪರಂಪರೆ, ವೈಜ್ಞಾನಿಕ ಸಾಧನೆಗಳು ಮತ್ತು ಆಧುನಿಕ ಮೂಲಸೌಕರ್ಯಗಳು ಬಲ ನೀಡುತ್ತಿವೆ ಎಂದರು.

ಪ್ರಧಾನಿ ಮೋದಿ ಅವರು ಐಐಟಿ ಮದ್ರಾಸ್‌ನಲ್ಲಿರುವ ಸುಧಾ ಗೋಪಾಲಕೃಷ್ಣನ್ ಮೆದುಳಿನ ಸಂಶೋಧನಾ ಕೇಂದ್ರವನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ಈ ಕೇಂದ್ರದ ಮೂಲಕ 100ಕ್ಕೂ ಹೆಚ್ಚು ಮಾನವ ಮೆದುಳುಗಳ ನಕ್ಷೆ ರೂಪಿಸಿ, ಜೀವಕೋಶಗಳ ಮಟ್ಟದಲ್ಲಿ ಮೂರು ಆಯಾಮದ-ತ್ರಿಡಿ ಮಾದರಿಗಳನ್ನು ಸಿದ್ಧಪಡಿಸುವ ಸಂಶೋಧನೆ ನಡೆಯಲಿದೆ. ಭ್ರೂಣಾವಸ್ಥೆಯಿಂದ ವೃದ್ಧಾಪ್ಯದವರೆಗಿನ ಮಾನವ ಜೀವನದ ವಿವಿಧ ಹಂತಗಳನ್ನು ಈ ಸಂಶೋಧನೆ ಒಳಗೊಳ್ಳಲಿದೆ.

ಇದಕ್ಕೂ ಮೊದಲು, ಸುಮಾರು 4 ಸಾವಿರದ 900 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಚೆನ್ನೈ ಮೆಟ್ರೋ ರೈಲು ಯೋಜನೆಯ ಎರಡನೇ ಹಂತದ ಪೂನಮಲಿ-ವಡಪಳನಿ ಮಾರ್ಗವನ್ನು ಪ್ರಧಾನಮಂತ್ರಿ ಉದ್ಘಾಟಿಸಿದರು.

ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರೊಂದಿಗೆ ಹೊಸ ಮೆಟ್ರೋ ಸೇವೆಗಳಿಗೆ ಹಸಿರು ನಿಶಾನೆ ತೋರಿದ ಪ್ರಧಾನಿಯವರು, ಮೆಟ್ರೋ ರೈಲಿನಲ್ಲಿ ಪ್ರಯಾಣಿಸಿದರು.

---

ಜಗತ್ತು ಹೊಸ ಸವಾಲುಗಳಿಗೆ ಪರಿಹಾರೋಪಾಯಗಳನ್ನು ಹುಡುಕುತ್ತಿದ್ದು, ಭಾರತದ ಯುವಜನತೆಗೆ ಅಂತಹ ಪರಿಹಾರಗಳನ್ನು ಒದಗಿಸುವ ಪ್ರತಿಭೆ ಹಾಗೂ ಸಾಮರ್ಥ್ಯವಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.
ಚೆನ್ನೈನ ಜೈಗೋಪಾಲ್ ಗರೋಡಿಯಾ ಹಿಂದೂ ವಿದ್ಯಾಲಯದ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, 'ವಿಕಸಿತ ಭಾರತ'ದ ಕನಸನ್ನು ಸಾಕಾರಗೊಳಿಸುವಲ್ಲಿ ಯುವಜನರು ನಿರ್ಣಾಯಕ ಪಾತ್ರ ವಹಿಸಲಿದ್ದಾರೆ ಭಾರತ, ಯುವಜನರಿಗೆ ಅಪಾರ ಅವಕಾಶಗಳನ್ನು ಒದಗಿಸುತ್ತಿದೆ. ಯುವಜನರು ತಮ್ಮ ಸಾಮರ್ಥ್ಯವನ್ನು ಅರಿತುಕೊಂಡು ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡಬೇಕು. ಹೊಸ ಆಲೋಚನೆಗಳು ಮತ್ತು ಪರಿಹಾರೋಪಾಯಗಳು ಭಾರತದ ಭವಿಷ್ಯವನ್ನು ಮಾತ್ರವಲ್ಲದೆ, ಜಗತ್ತಿನ ಭವಿಷ್ಯವನ್ನೂ ರೂಪಿಸಲಿವೆ. ಸಾಮೂಹಿಕ ಪ್ರಯತ್ನಗಳ ಮೂಲಕ ದೇಶದ ಆಕಾಂಕ್ಷೆಗಳನ್ನು ಸಾಕಾರಗೊಳಿಸಬಹುದಾಗಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.
ಭಾರತದ ಉತ್ಪಾದನಾ ವಲಯದ ಬೆಳವಣಿಗೆ ಬಗ್ಗೆ ಪ್ರಸ್ತಾಪಿಸಿದ ಪ್ರಧಾನಿ ಅವರು ಈ ವಲಯದ ವಿಸ್ತರಣೆಯು ಯುವಜನರಿಗೆ ನೇರ ಮತ್ತು ಪರೋಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸಿದೆ. ಭಾರತದ ರಕ್ಷಣಾ ರಫ್ತು 50 ಪಟ್ಟು ಹೆಚ್ಚಾಗಿದ್ದು, ಎಂಜಿನಿಯರಿಂಗ್ ರಫ್ತುಗಳು ಹೊಸ ದಾಖಲೆಯನ್ನು ನಿರ್ಮಿಸಿವೆ. ಭಾರತ, ವಿಶ್ವದ ಎರಡನೇ ಅತಿದೊಡ್ಡ ಮೊಬೈಲ್ ಫೋನ್ ಉತ್ಪಾದಕ ದೇಶವಾಗಿ ಹೊರಹೊಮ್ಮಿದ್ದು, 2014 ರಿಂದ ಎಲೆಕ್ಟ್ರಾನಿಕ್ಸ್ ರಫ್ತು 11 ಪಟ್ಟು ಹೆಚ್ಚಾಗಿದೆ ಎಂದರು. ಮೆಟ್ರೋ ರೈಲು ಸೇವೆಗಳ ವಿಸ್ತರಣೆ ಕುರಿತು ಮಾತನಾಡಿದ ಪ್ರಧಾನಿ ಅವರು, ಮೆಟ್ರೋ ಸಂಪರ್ಕ ಹೊಂದಿರುವ ನಗರಗಳ ಸಂಖ್ಯೆ 2014 ರಲ್ಲಿ 5 ರಷ್ಟಿದ್ದು, ಪ್ರಸ್ತುತ ಈ ಸಂಖ್ಯೆ 25 ಕ್ಕೆ ಏರಿದೆ ಎಂದು ತಿಳಿಸಿದರು.

---

ನವರಾತ್ರಿ ಮತ್ತು ದಸರಾ ಮಹೋತ್ಸವ ದೇಶಾದ್ಯಂತ ಇಂದು ಆರಂಭವಾಗಿದೆ.

ವಿಶ್ವವಿಖ್ಯಾತ ಮೈಸೂರು ದಸರಾ ಉತ್ಸವಕ್ಕೆ ಕೊಪ್ಪಳ ಗವಿ ಮಠದ ಅಭಿನವ ಶ್ರೀ ಗವಿ ಸಿದ್ದೇಶ್ವರ ಸ್ವಾಮೀಜಿಯವರು ಚಾಲನೆ ನೀಡಿದರು. ಚಾಮುಂಡಿ ಬೆಟ್ಟದಲ್ಲಿ ನಡೆದ ಸಮಾರಂಭದಲ್ಲಿ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮಾಡುವುದರ ಮೂಲಕ ಸ್ವಾಮೀಜಿಯವರು ಉತ್ಸವವನ್ನು ಉದ್ಘಾಟಿಸಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತಿತರ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮಡಿಕೇರಿ, ಶೃಂಗೇರಿ ಸೇರಿದಂತೆ ಕರ್ನಾಟಕದ ಅನೇಕ ಕಡೆ ದಸರಾ ಸಂಭ್ರಮ ಮನೆಮಾಡಿದೆ.

---

ಶಾಂತಿಯುತವಾಗಿ ಗುಂಪು ಸೇರುವ ಜನರನ್ನು ಕಾನೂನುಬಾಹಿರವಾಗಿ ವಶಕ್ಕೆ ತೆಗೆದುಕೊಳ್ಳಬಾರದು ಮತ್ತು ಸಂಚಾರ ನಿಯಮಗಳಿಗೆ ಒಳಪಟ್ಟು ಜನರ ಮುಕ್ತ ಸಂಚಾರಕ್ಕೆ ಅವಕಾಶ ಕಲ್ಪಿಸಿಕೊಡಬೇಕು ಎಂದು ಸುಪ್ರೀಂಕೋರ್ಟ್ ಇಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ. ದೆಹಲಿಯಲ್ಲಿ ಹಾಕಿರುವ ಬ್ಯಾರಿಕೇಡ್‌ಗಳ ವ್ಯವಸ್ಥೆಯನ್ನು ಪರಿಶೀಲಿಸುವಂತೆಯೂ ನ್ಯಾಯಾಲಯ ಸೂಚಿಸಿದೆ.

ಅಲ್ಲದೆ, ಕಾನೂನು ಮತ್ತು ಸುವ್ಯವಸ್ಥೆಯ ಅಗತ್ಯಗಳಿಗೆ ಒಳಪಟ್ಟು, ಮೆಟ್ರೋ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸುವುದನ್ನು ಮತ್ತು ಇಂಟರ್ನೆಟ್ ಸೇವೆಗಳು ಅಡೆತಡೆಯಿಲ್ಲದೆ ಮುಂದುವರಿಯುವುದನ್ನು ಖಚಿತಪಡಿಸಿಕೊಳ್ಳುವಂತೆಯೂ ನ್ಯಾಯಾಲಯ ಕೇಂದ್ರಕ್ಕೆ ನಿರ್ದೇಶನ ನೀಡಿದೆ.

ಪ್ರಸ್ತುತ ಇರುವ ಕಾನೂನು ಮತ್ತು ಸುವ್ಯವಸ್ಥೆಯ ಪರಿಸ್ಥಿತಿಗೆ ಅನುಗುಣವಾಗಿ ಮೆಟ್ರೋ ಮತ್ತು ರೈಲು ಸೇವೆಗಳು ಸಾಮಾನ್ಯ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ನ್ಯಾಯಾಲಯ ಹೇಳಿದೆ. ವಕೀಲರು ತಮ್ಮ ವೃತ್ತಿಪರ ಕರ್ತವ್ಯಗಳನ್ನು ನಿರ್ವಹಿಸುವುದಕ್ಕೆ ಯಾವುದೇ ರೀತಿ ಅಡ್ಡಿಪಡಿಸಬಾರದು ಎಂದೂ ಸಹ ಸುಪ್ರೀಂಕೋರ್ಟ್ ನಿರ್ದೇಶಿಸಿದೆ.

ಅಕ್ಟೋಬರ್ 10 ರಂದು ಮೆಟ್ರೋ ಜಾಲದಾದ್ಯಂತ ಇರುವ ಒಟ್ಟು 303 ನಿಲ್ದಾಣಗಳ ಪೈಕಿ ಕೇವಲ 45 ನಿಲ್ದಾಣಗಳಲ್ಲಿ ಮಾತ್ರ ಪ್ರವೇಶ ಮತ್ತು ನಿರ್ಗಮನವನ್ನು ನಿರ್ಬಂಧಿಸಲಾಗಿತ್ತು ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ನ್ಯಾಯಾಲಯಕ್ಕೆ ಮಾಹಿತಿ ನೀಡಿದರು.

ಶಾಂತಿಯುತ ಸಭೆ ಸೇರುವಿಕೆ, ಜನರ ಸಂಚಾರ ಮತ್ತು ವಕೀಲರ ವೃತ್ತಿಪರ ಕರ್ತವ್ಯಗಳ ನಿರ್ವಹಣೆಗೆ ಅನಗತ್ಯವಾಗಿ ಅಡ್ಡಿಪಡಿಸಬಾರದು ಎಂದು ಸುಪ್ರೀಂ ಕೋರ್ಟ್ ಪ್ರತಿಪಾದಿಸಿದೆ.

---

ಜನ ಸೇವೆಯೇ ದೇಶ ಸೇವೆ' ಎಂಬ ಮನೋಭಾವದೊಂದಿಗೆ ನಾಗರಿಕರ ಅಭ್ಯುದಯಕ್ಕೆ ಬದ್ಧತೆಯಿಂದ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಪೂರೈಸಿದ್ದಾರೆ.

ಸೇವೆ ಮತ್ತು ಉತ್ತಮ ಆಡಳಿತದ ಮುನ್ನೋಟದೊಂದಿಗೆ 2047ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗಲು ಸರ್ಕಾರ ಕಾರ್ಯಪ್ರವೃತ್ತವಾಗಿದೆ. ಈ ನಿಟ್ಟಿನಲ್ಲಿ ಹಲವು ವಲಯಗಳಲ್ಲಿ ಕೈಗೊಂಡಿರುವ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 2 ಕುರಿತ ಒಂದು ವರದಿ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ಎರಡನ್ನು 2022 ರ ನವೆಂಬರ್ 11ರಂದು ತೆರೆಯಲಾಯಿತು ಮತ್ತು ಬೆಂಗಳೂರಿನ ವಾರ್ಷಿಕ ಪ್ರಯಾಣಿಕರ ಸಾಮರ್ಥ್ಯವನ್ನು ಸುಮಾರು 2.5 ಕೋಟಿಯಿಂದ ಐದರಿಂದ ಆರು ಕೋಟಿಗೆ ದ್ವಿಗುಣಗೊಳಿಸಿತು. 10 ಸಾವಿರ ಚದರ ಮೀಟರ್ ಗಿಂತ ಹೆಚ್ಚು ಹಸಿರು ಗೋಡೆಗಳು, ನೇತಾಡುವ ಉದ್ಯಾನಗಳು ಮತ್ತು ಹೊರಾಂಗಣ ಉದ್ಯಾನಗಳು ಶೇಕಡಾ 100 ರಷ್ಟು ನವೀಕರಿಸಬಹುದಾದ ಇಂಧನದಿಂದ ಚಲಿಸುವ ಕ್ಯಾಂಪಸ್ ಅನ್ನು ಸುತ್ತುವರೆದಿವೆ.

ಟರ್ಮಿನಲ್ ಪಕ್ಕದಲ್ಲಿ 1537ರಲ್ಲಿ ಬೆಂಗಳೂರಿನ ಸಂಸ್ಥಾಪಕ ನಾಡಪ್ರಭು ಕೆಂಪೇಗೌಡ ಅವರ 108 ಅಡಿ ಎತ್ತರದ ಬೃಹತ್ ಪ್ರತಿಮೆಯನ್ನು ನಿರ್ಮಿಸಲಾಗಿದೆ. ಇದು ಅವರ ಅತಿ ಎತ್ತರದ ಕಂಚಿನ ಪ್ರತಿಮೆಯಾಗಿದ್ದು, ಅವರ ಕೈಯಲ್ಲಿರುವ ಕತ್ತಿ ಸುಮಾರು ನಾಲ್ಕು ಟನ್ ತೂಕವಿದೆ.

---

ಪೂರ್ವ ಆಫ್ರಿಕಾದ ಜಿಬೂಟಿ ದೇಶದ ಕರಾವಳಿಯಲ್ಲಿ 305 ಜನರನ್ನು ಹೊತ್ತೊಯ್ಯುತ್ತಿದ್ದ ದೋಣಿಯೊಂದು ಮಗುಚಿ ಬಿದ್ದ ಪರಿಣಾಮ, 15 ಮಕ್ಕಳು ಸೇರಿದಂತೆ ಒಟ್ಟು 109 ವಲಸಿಗರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ಅಂತರರಾಷ್ಟ್ರೀಯ ವಲಸೆ ಸಂಸ್ಥೆ ವರದಿ ಮಾಡಿದೆ.

ಗುರುವಾರ ರಾತ್ರಿ ಈ ಅಪಘಾತ ಸಂಭವಿಸಿದಾಗ ದೋಣಿಯು ಜಿಬೂಟಿಯಿಂದ ಯೆಮೆನ್‌ಗೆ ಪ್ರಯಾಣಿಸುತ್ತಿತ್ತು. ಮೃತಪಟ್ಟವರಲ್ಲಿ 52 ಪುರುಷರು, 42 ಮಹಿಳೆಯರು ಮತ್ತು 15 ಮಕ್ಕಳು ಸೇರಿದ್ದಾರೆ. 80ಕ್ಕೂ ಹೆಚ್ಚು ಮಂದಿ ಪ್ರಾಣಾಪಾಯದಿಂದ ಪಾರಾಗಿದ್ದು, ಕನಿಷ್ಠ 116 ಮಂದಿ ಇನ್ನೂ ನಾಪತ್ತೆಯಾಗಿದ್ದಾರೆ.

---

ಕಾಂಗ್ರೆಸ್ ಪಕ್ಷ ದೇಶದಲ್ಲಿ ಎಸ್ಐಆರ್ ನೆಪದಲ್ಲಿ ಅರಾಜಕತೆ ಸೃಷ್ಟಿಸಲು ಯತ್ನಿಸುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ.

ಅವರು ಹುಬ್ಬಳ್ಳಿಯಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿ, ದೆಹಲಿಯಲ್ಲಿ ನಿನ್ನೆಯ ಪ್ರತಿಭಟನೆ ನ್ಯಾಯಸಮ್ಮತ ಹೋರಾಟ ಆಗಿರಲಿಲ್ಲ. ಬದಲಿಗೆ ಅರಾಜಕತೆ ಸೃಷ್ಟಿಸಲು ಮಾಡಿದ ಯತ್ನ ಎಂದು ಪ್ರತಿಕ್ರಿಯಿಸಿದರು.

ದೇಶದ ಶ್ರೇಷ್ಠ ಸಂವಿಧಾನ, ಪ್ರಜಾಪ್ರಭುತ್ವ ವ್ಯವಸ್ಥೆ, ಮಾದರಿಯಲ್ಲೇ ಎಸ್ಐಆರ್ ನ್ಯಾಯ ಮತ್ತು ಅತ್ಯಂತ ಪಾರದರ್ಶಕ ಪದ್ಧತಿಯಲ್ಲಿ ನಡೆಯುತ್ತಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟಪಡಿಸಿದರು.

---

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ಭಾರತ – ವೆಸ್ಟ್ ಇಂಡೀಸ್ ನಡುವಿನ 3ನೇ ಟಿ–20 ಕ್ರಿಕೆಟ್ ಪಂದ್ಯ ಆರಂಭವಾಗಿದ್ದು, ಟಾಸ್ ಗೆದ್ದ ವೆಸ್ಟ್ ಇಂಡೀಸ್ ಬೌಲಿಂಗ್ ಆಯ್ಕೆ ಮಾಡಿಕೊಂಡಿದೆ.
ಐದು ಪಂದ್ಯಗಳ ಸರಣಿಯಲ್ಲಿ ಎರಡೂ ತಂಡಗಳು 1–1 ರಿಂದ ಸಮಬಲ ಹೊಂದಿವೆ.

---

ನೇಪಾಳದ ಗೋರ್ಖಾ ಜಿಲ್ಲೆಯಲ್ಲಿ ಬುಧಿ ಗಂಡಕಿ ನದಿಯಲ್ಲಿ ಉಂಟಾದ ಹಠಾತ್ ಪ್ರವಾಹದಿಂದ ಅನೇಕ ಮನೆಗಳು ಮತ್ತು ಸೇತುವೆಗಳು ಕೊಚ್ಚಿ ಹೋಗಿದ್ದು, ಜಲವಿದ್ಯುತ್ ಯೋಜನೆಗಳಿಗೆ ಹಾನಿಯಾಗಿದೆ. ಪ್ರವಾಹದಲ್ಲಿ ಸಿಲುಕಿದ ಸುಮಾರು 50 ಜನರನ್ನು ರಕ್ಷಿಸಲಾಗಿದೆ.

ಇಂದು ಮುಂಜಾನೆ 4 ಗಂಟೆ ಸುಮಾರಿಗೆ ಸಂಭವಿಸಿದ ಈ ಪ್ರವಾಹವು ಚುಮ್ನುಬ್ರಿ ಪುರಸಭೆಯ ವ್ಯಾಪ್ತಿಯಲ್ಲಿರುವ ವಸತಿ ಪ್ರದೇಶಗಳ ಮೇಲೆ ಅಪ್ಪಳಿಸಿದ್ದು, ಕನಿಷ್ಠ 10 ಮಂದಿ ನಾಪತ್ತೆಯಾಗಿದ್ದಾರೆ, ಆದರೆ ಪ್ರಾಣಹಾನಿಯ ಬಗ್ಗೆ ಸದ್ಯ ವರದಿಯಾಗಿಲ್ಲ.

---

ರೈಲ್ವೆ ನೇಮಕಾತಿ ಮಂಡಳಿಯು 2026ನೇ ಸಾಲಿನ ಪದವೀಧರರಿಗಾಗಿ ತಾಂತ್ರಿಕೇತರ ವರ್ಗಗಳ ನೇಮಕಾತಿ ಅಧಿಸೂಚನೆಯನ್ನು ಬಿಡುಗಡೆ ಮಾಡಿದೆ.

ಭಾರತೀಯ ರೈಲ್ವೆಯಲ್ಲಿ ಒಟ್ಟು 3 ಸಾವಿರದ 548 ಪದವೀಧರ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

ಮುಖ್ಯ ವಾಣಿಜ್ಯ ಮತ್ತು ಟಿಕೆಟ್ ಮೇಲ್ವಿಚಾರಕರು, ಸರಕು ರೈಲು ವ್ಯವಸ್ಥಾಪಕರು, ಕಿರಿಯ ಲೆಕ್ಕ ಸಹಾಯಕ ಹಾಗೂ ಬೆರಳಚ್ಚುಗಾರರು ಮತ್ತು ಹಿರಿಯ ಗುಮಾಸ್ತ ಹುದ್ದೆಗಳು ಇದರಲ್ಲಿ ಸೇರಿವೆ.

ಆನ್‌ಲೈನ್ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಈ ತಿಂಗಳ 8ರಂದು ಆರಂಭವಾಗಿದ್ದು, ಅರ್ಹ ಅಭ್ಯರ್ಥಿಗಳು ನವೆಂಬರ್ 6ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹುದ್ದೆಗಳ ವಿವರ, ಅರ್ಹತಾ ಮಾನದಂಡಗಳು ಹಾಗೂ ನೇಮಕಾತಿಗೆ ಸಂಬಂಧಿಸಿದ ಮಾಹಿತಿಯನ್ನು ರೈಲ್ವೆ ನೇಮಕಾತಿ ಮಂಡಳಿಯ ಅಧಿಕೃತ ಜಾಲತಾಣದಲ್ಲಿ ಪಡೆಯಬಹುದು.

__________ ಮುಕ್ತಾಯ __________